ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

381 (555) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಪೂರ್ಣ ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಆ) ಸದರಿ ವಿದ್ಯಾರ್ಥಿನಿಲಯಗಳಲ್ಲಿ ಮಂಜೂರಾದ ಹುದ್ದೆ ಮತ್ತು ಖಾಲಿ ಇರುವ ಹುದ್ದೆಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳ ನೌಕರರ ಖಾಲಿ ಇರುವ ಹುದ್ದೆಗಳ ನೇಮಕಾತಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಹೊರಗುತ್ತಿಗೆ ನೀಡಿರುವ ಏಜೆನ್ಸಿಯ ಪೂರ್ಣ ವಿವರ ನೀಡುವುದು)

(ಉ) ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)